(ಇ) ಆದರೆ ದೇವಾಲಯಕ್ಕೆ ಸಂಪರ್ಕ ಕಲ್ಪಿಸುವ ರಸ್ತೆ ದುರಸ್ಥಿ ಹಾಗೂ ಒಳಚರಂಡಿ ಕಾಮಗಾರಿಗೆ ಸಂಬಂಧಿಸಿದಂತೆ ದೇವಾಲಯದ ಆಡಳಿತ ವರ್ಗದವರು ರೂ. 86.50 ಲಕ್ಷದ ಪ್ರಸ್ಥಾವನೆಯನ್ನು ಸಲ್ಲಿಸಿದ್ದು, ಈ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ.

(ಈ) ಶ್ರೀ ಹುಲಿಗೆಮ್ಮ ದೇವಾಲಯದಲ್ಲಿ ವಾರ್ಷಿಕ ಆದಾಯವು 2007–08ನೇ ಸಾಲಿನಲ್ಲಿ ರೂ. 1,59,89,100/– ಇರುವುದರಿಂದ ಸರ್ಕಾರದಿಂದ ಅನುದಾನ ನೀಡುವ ಪ್ರಶ್ನೆ ಉದ್ಭವಿಸುವುದಿಲ್ಲ.

50 (143) ಶ್ರೀ ಕರಡಿ ಸಂಗಣ್ಣ ಅಮರಪ್ಪ :– ಮಾನ್ಯ ಉನ್ನತ ಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಕೊಪ್ಪಳದಲ್ಲಿ ಮೆಡಿಕಲ್ ಮತ್ತು ಇಂಜಿನಿಯರಿಂಗ್ ಕಾಲೇಜುಗಳನ್ನು ತೆರೆಯುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಆ) ಹಾಗಿದ್ದಲ್ಲಿ, ಎಂದಿನಿಂದ ಪ್ರಾರಂಭಿಸಲಾಗುವುದು;

(ಇ) ಮೇಲ್ಕಂಡ ಕಾಲೇಜುಗಳಿಗೆ ಸರ್ಕಾರದಿಂದ ಮಂಜೂರಾಗಿರುವ ಅನುದಾನ ಎಷ್ಟು;

(ಈ) ಮುಂಬರುವ ಶೈಕ್ಷಣಿಕ ವರ್ಷದಿಂದ ಮೇಲ್ಕಂಡ ಕಾಲೆಜುಗಳನ್ನು ತೆರೆಯಲಾಗುವುದೇ?

ಶ್ರೀ ಅರವಿಂದ ಲಿಂಬಾವಳಿ (ಮಾನ್ಯ ಉನ್ನತ ಶಿಕ್ಷಣ ಸಚಿವರು):

(ಅ) ಕೊಪ್ಪಳದಲ್ಲಿ ಮೆಡಿಕಲ್ ಮತ್ತು ಇಂಜಿನಿಯರಿಂಗ್ ಕಾಲೇಜುಗಳನ್ನು ತೆರೆಯುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

(ಆ) ಉದ್ಭವಿಸುವುದಿಲ್ಲ

(ಇ) ಉದ್ಭವಿಸುವುದಿಲ್ಲ

(ಈ) ಉದ್ಭವಿಸುವುದಿಲ್ಲ

51 (40) ಶ್ರೀ ಹೆಚ್.ಕೆ. ಕುಮಾರಸ್ವಾಮಿ (ಸಕಲೇಶಪುರ) :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಇತ್ತೀಚಿಗೆ ಅನುದಾನಕ್ಕೆ ಒಳಪಟ್ಟ ಪರಿಶಿಷ್ಟ ಜಾತಿ ಪರಿಶಿಷ್ಟ ವರ್ಗಗಳ ಆಡಳಿತ ಮಂಡಳಿಯ ಶಾಲಾ ಕಾಲೇಜುಗಳ ಶಿಕ್ಷಕೇತರ ಸಿಬ್ಬಂದಿಯನ್ನು (ಅಟೆಂಡರ್, ಜವಾನ) ನೇಮಕಾತಿಗೆ ಅವಕಾಶ ಮಾಡದಿರುವುದು ನಿಜವೇ;

(ಆ) ಈ ನೇಮಕಾತಿಗೆ ಸರ್ಕಾರವು ಕೈಗೊಳ್ಳುವ ಕ್ರಮವೇನು?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :–

(ಅ) ಬೋಧಕೇತರ ಹುದ್ದೆಗಳನ್ನು ತುಂಬುವುದಕ್ಕೆ ಸಂಬಂಧಿಸಿದಂತೆ ಮಿತವ್ಯಯ ಆದೇಶ ಜಾರಿಯಲ್ಲಿದೆ. ಆದುದರಿಂದ, ನೇಮಕಾತಿ ಮಾಡಲು ಅವಕಾಶ ಇಲ್ಲ.

52 (41) ಶ್ರೀ ಹೆಚ್.ಕೆ. ಕುಮಾರಸ್ವಾಮಿ :– :– ಮಾನ್ಯ ಉನ್ನತ ಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಪ್ರಥಮ ದರ್ಜೆ ಕಾಲೇಜುಗಳಲ್ಲಿ ಉಪನ್ಯಾಸಕರು ಮತ್ತು ಇತರೇ ಸಿಬ್ಬಂದಿಯ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

(ಆ) ಹಾಗೂ ನೂತನ ಕಾಲೇಜುಗಳಲ್ಲಿ ಉಪನ್ಯಾಸಕರೇ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

(ಇ) ಬಂದಿದ್ದಲ್ಲಿ, ನೇಮಕಾತಿಗೆ ಕೈಗೊಂಡ ಕ್ರಮಗಳೇನು?

(ಈ) ಸಕಲೇಶಪುರ ಕ್ಷೇತ್ರದಲ್ಲಿ ಖಾಲಿ ಇರುವ ಉಪನ್ಯಾಸಕರು ಮತ್ತು ಸಿಬ್ಬಂದಿಗಳನ್ನು ಯಾವಾಗ ನೇಮಕ ಮಾಡಿಕೊಳ್ಳಲಾಗುವುದು?

ಶ್ರೀ ಅರವಿಂದ ಲಿಂಬಾವಳಿ (ಮಾನ್ಯ ಉನ್ನತ ಶಿಕ್ಷಣ ಸಚಿವರು):

(ಅ) ಹೌದು

(ಆ) ಹೌದು

(ಇ) ಕಾಲೇಜು ಶಿಕ್ಷಣ ಇಲಾಖೆಯ ವಿವಿಧ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಒಟ್ಟು 2550 ಉಪನ್ಯಾಸಕರ ಹುದ್ದೆಗಳನ್ನು ಕರ್ನಾಟಕ ಲೋಕ ಸೇವಾ ಆಯೋಗದ ಮೂಲಕ ತುಂಬಲು ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಅದೇ ರೀತಿ ಇಲಾಖೆಯ ಬೋಧಕ ವರ್ಗದ ವಿವಿಧ ವೃಂದಗಳಲ್ಲಿ ಖಾಲಿ ಇರುವ ಒಟ್ಟು 407 ಬೋಧಕೇತರ ಹುದ್ದೆಗಳನ್ನು ಸಹ ಕರ್ನಾಟಕ ಲೋಕ ಸೇವಾ ಆಯೋಗದ ಮುಖಾಂತರ ತುಂಬಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಈ ಬೋಧಕ ಹಾಗೂ ಬೋಧಕೇತರ ಹುದ್ದೆಗಳ ಆಯ್ಕೆ ಪ್ರಕ್ರಿಯೆ ಪ್ರಗತಿಯಲ್ಲಿದೆ. ಅದಲ್ಲದೆ ಬಡ್ತಿಗೆ ಮೀಸಲಾದ ಬೋಧಕೇತರ ಗ್ರೂಪ್–ಡಿ ಹುದ್ದೆಗಳನ್ನು ಬಡ್ತಿ ಮುಖಾಂತರ ತುಂಬಲು ಕ್ರಮ ಕೈಗೊಳ್ಳಲಾಗುತ್ತಿದ್ದು, 546 ಪರಿಚಾರಕರ ಹುದ್ದೆಗಳನ್ನು ಆಯಾ ಜಿಲ್ಲಾವಾರು ಆಯ್ಕೆ ಸಮಿತಿಯ ಮೂಲಕ ನೇರ ನೇಮಕಾತಿ ಮಾಡಿಕೊಳ್ಳಲು ಇಲಾಖೆಯ ಹಂತದಲ್ಲಿ ಕ್ರಮ ಕೈಗೊಳ್ಳಲಾಗುತ್ತಿದೆ. ಉಳಿದ ಪರಿಚಾರಕರ ಹುದ್ದೆಗಳನ್ನು ಅನುಕಂಪದ ಆಧಾರದ